**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/252/ಸ್ಥಗಿತ ವೇತನ/2013-14/ಸೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:03-03-2022.

## ಸುತ್ತೋಲೆ

**ವಿಷಯ:** ಖಾಸಗಿ ಅನುದಾನಿತ ಕಾಲೇಜುಗಳಲ್ಲಿನ ಬೋಧಕೇತರ ಸಿಬ್ಬಂದಿಗಳಿಗೆ 6ನೇ ಸ್ಥಗಿತ ವೇತನ ಬಡ್ತಿಯನ್ನು ಮಂಜೂರು ಮಾಡದಿರುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ:ಎಫ್.ಡಿ/12/ಎಸ್.ಆರ್.ಪಿ/2012 (VII), ದಿನಾಂಕ:14-06-2012.
2. ಈ ಕಛೇರಿಯ ಸಮ ಸಂಖ್ಯೆ ಪತ್ರ ದಿನಾಂಕ:06-08-2014, 08-12-2014, 06-10-2015, 31-03-2016, 07-09-2016, 23-11-2020, 28-06-2021 ಮತ್ತು ದಿನಾಂಕ:22-02-2022.

** ** **

ಸರ್ಕಾರಿ ನೌಕರರಿಗೆ ಉಲ್ಲೇಖ (01)ರ ಆದೇಶದಲ್ಲಿ ದಿನಾಂಕ:01-04-2012 ರಿಂದ ಜಾರಿಗೆ ಬರುವಂತೆ ಈ ಹಿಂದೆ ನೀಡಲಾಗುತ್ತಿದ್ದ 05 ಸ್ಥಗಿತ ಬಡ್ತಿ ವೇತನಗಳನ್ನು 08 ಸ್ಥಗಿತ ವೇತನ ಬಡ್ತಿಗಳಿಗೆ ಹೆಚ್ಚಿಸಿ ವಿಸ್ತರಿಸಲು ಆದೇಶಿಸಲಾಗಿದೆ. ಆದರೆ ಸದರಿ ಸೌಲಭ್ಯವನ್ನು ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಸಿಬ್ಬಂದಿಗಳಿಗೆ ವಿಸ್ತರಿಸಿರುವುದಿಲ್ಲ. ಸದರಿ ಸೌಲಭ್ಯವನ್ನು ಅನುದಾನಿತ ಪದವಿ ಕಾಲೇಜುಗಳಲ್ಲಿ ರಾಜ್ಯ ವೇತನ ಶ್ರೇಣಿ ಪಡೆಯುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ವಿಸ್ತರಿಸಲು ಕ್ರಮವಹಿಸುವಂತೆ ಉಲ್ಲೇಖ (02)ರ ಈ ಕಛೇರಿಯ ಸಮಸಂಖ್ಯೆಯ ಪತ್ರಗಳಲ್ಲಿ ಸರ್ಕಾರವನ್ನು ಕೋರಲಾಗಿದೆ. ಆದ್ದರಿಂದ ಪ್ರಸ್ತುತ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿಗಳಿಗೆ ಪ್ರಸ್ತುತ ಜಾರಿಯಲ್ಲಿರುವ 05 ಸ್ಥಗಿತ ವೇತನ ಬಡ್ತಿಗಳನ್ನು ಮಾತ್ರ ಜಾರಿಗೊಳಿಸಲು ಅವಕಾಶವಿದ್ದು, ಅದರಂತೆ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ.

R. Mugeshal

**ಕಾಲೇಜು ಶಿಕ್ಷಣ ಹೆಚ್ಚುವರಿ ನಿರ್ದೇಶಕರು**

**ಇವರಿಗೆ:**

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತುಕಲಬುರಗಿ.
2. ಮಹಾಲೇಖಪಾಲಕರು (A&E), ಕರ್ನಾಟಕ, ಬೆಂಗಳೂರು.
3. ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು, ಸದರಿ ಸುತ್ತೋಲೆಯನ್ನು ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.
4. ಸಹಾಯಕ ನಿರ್ದೇಶಕರು/ ಮ್ಯಾನೇಜರ್, ಪಿಂಚಣಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
5. ಕಛೇರಿ ಪ್ರತಿ.